ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

ಕೃಷ್ಣ–ತುಂಗ ಆವರಣ, ಮಂತ್ರಾಲಯ ರಸ್ತೆ (ಎನ್.ಹೆಚ್. 167), ಯರಗೇರಾ–584133, ರಾಯಚೂರು, ಕರ್ನಾಟಕ

ಶೈಕ್ಷಣಿಕ ವಿಭಾಗ

E-mail: registrarrur@gmail.com Website: https://raichuruniversity.ac.in

ಕ್ರ.ಸಂ:ರಾವಿರಾ/ಶೈಕ್ಷಣಿಕ/ಪ್ರವೇಶ/ಪಿಜಿ/2023–24/ ದಿನಾಂಕ: 20–10–2023

## ಸ್ನಾತಕೋತ್ತರ ಪದವಿ ಪ್ರವೇಶಾತಿ ಅಧಿಸೂಚನೆ

ರಾಯಚೂರು ವಿಶ್ವವಿದ್ಯಾಲಯದ ವಿವಿಧ ಸ್ನಾತಕೋತ್ತರ (CBCS) ಪದವಿಗಳಿಗಾಗಿ 2023–24ನೇ ಶೈಕ್ಷಣಿಕ ಸಾಲಿಗೆ ವಿಶ್ವವಿದ್ಯಾಲಯದ ಮುಖ್ಯ ಆವರಣ, ಸಂಲಗ್ನತೆ ಹೊಂದಿದ ಸರ್ಕಾರಿ/ಖಾಸಗಿ ಮಹಾವಿದ್ಯಾಲಯಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಕರ್ನಾಟಕ ಸರ್ಕಾರದ UUCMS ತಂತ್ರಾಂಶದ ಮುಖಾಂತರ ನಿಗದಿತ ನಮೂನೆಯಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಪ್ರವೇಶ ಪರೀಕ್ಷೆ ಮುಖಾಂತರ ಮಾತ್ರ ನೀಡಲಾಗುವುದು.

| ರಾಯಚೂರು ವಿಶ್ವವಿದ್ಯಾಲಯದ ಆವರಣದ ವಿಭಾಗಗಳಲ್ಲಿ/ ಸಂಯೋಜಿತ ಕಾಲೇಜುಗಳಲ್ಲಿ ಲಭ್ಯವಿರುವ ಸ್ನಾತಕೋತ್ತರ ಕೋರ್ಸ್‌ಗಳು | |
|---|---|
| ಕಲಾ ನಿಕಾಯ | ಕನ್ನಡ, ಇಂಗ್ಲಿಷ್, ಉರ್ದು ಮತ್ತು ಪರ್ಷಿಯನ್ |
| ಸಮಾಜ ವಿಜ್ಞಾನ ನಿಕಾಯ | ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಮಹಿಳಾ ಅಧ್ಯಯನ, ಸಮಾಜ ಕಾರ್ಯ ಮತ್ತು ಪತ್ರಿಕೋದ್ಯಮ & ಸಮೂಹ ಸಂವಹನ |
| ವಿಜ್ಞಾನ ನಿಕಾಯ | ವಿದ್ಯನ್ಮಾನ & ಉಪಕರಣಾತ್ಮಕ ತಂತ್ರಜ್ಞಾನ, ಭೌತಶಾಸ್ತ್ರ, ರಸಾಯನ ಶಾಸ್ತ್ರ, ಗಣಿತಶಾಸ್ತ್ರ, ಗಣಕ ವಿಜ್ಞಾನ, ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ, ಸೂಕ್ಷ್ಮಜೀವಶಾಸ್ತ್ರ ಮತ್ತು ಗ್ರಂಥಾಲಯ & ಮಾಹಿತಿ ವಿಜ್ಞಾನ |
| ವಾಣಿಜ್ಯ ನಿಕಾಯ | ವಾಣಿಜ್ಯ |

**ಸೂಚನೆ :**

ರಾಯಚೂರು ವಿಶ್ವವಿದ್ಯಾಲಯ ಹಾಗೂ ಸಂಯೋಜಿತ ಕಾಲೇಜುಗಳಲ್ಲಿನ ವಿಷಯವಾರು ಪ್ರವೇಶಾತಿಯ ಸಂಖ್ಯೆ ಹಾಗೂ ಅರ್ಹತೆಯ ಮಾನದಂಡಗಳ ಮಾಹಿತಿಯು ವಿಶ್ವವಿದ್ಯಾಲಯದ ಜಾಲತಾಣದಲ್ಲಿ https://raichuruniversity.ac.in ಲಭ್ಯವಿರುತ್ತದೆ.

**ಅರ್ಜಿಗಳನ್ನು UUCMS ಆನ್‌ಲೈನ್ ಪೋರ್ಟಲ್ ಮೂಲಕ ಸಲ್ಲಿಸಲು ಮಾರ್ಗಸೂಚಿಗಳು**

1. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ಅರ್ಜಿಗಳನ್ನು ಸಲ್ಲಿಸಬಯಸುವ ಅಭ್ಯರ್ಥಿಗಳು ಆನ್‌ಲೈನ್ ಪೋರ್ಟಲ್ https://uucms.karnataka.gov.in/Login/Index ಮೂಲಕವೇ ಅರ್ಜಿಗಳನ್ನು ಸಲ್ಲಿಸುವುದು. (ಅಭ್ಯರ್ಥಿಗಳ ಪ್ರವೇಶಾತಿ– user manual ನೋಡುವುದು).
2. ಒಂದಕ್ಕಿಂತ ಹೆಚ್ಚಿನ ಕೋರ್ಸುಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಇಚ್ಛಿಸಿದ ಕೋರ್ಸುಗಳನ್ನು ಆಯ್ದುಕೊಂಡು ಪ್ರತ್ಯೇಕವಾಗಿ ಶುಲ್ಕ ಪಾವತಿಸಿ ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಸಲ್ಲಿಸುವುದು.
3. ಅರ್ಜಿ ಶುಲ್ಕ ರೂ.800/– ( ಕರ್ನಾಟಕದ ನಿವಾಸಿಯಾದ ಪ.ಜಾತಿ/ಪ ಪಂಗಡ/ ಪ್ರವರ್ಗ–1 ಮತ್ತು ತೃತೀಯ ಲಿಂಗಿಗಳಿಗೆ ರೂ. 400/– ಮಾತ್ರ) ಗಳನ್ನು ಆನ್‌ಲೈನ್‌ನಲ್ಲಿ ತಿಳಿಸಿರುವ ಲಿಂಕನ್ನು ಬಳಸಿ ಪಾವತಿಸುವುದು.
4. ಅರ್ಹತೆ, ವಿಶ್ವವಿದ್ಯಾಲಯದ ಸಂಯೋಜಿತ ಕಾಲೇಜುಗಳ ಪಟ್ಟಿ, ಕೋರ್ಸಿನ ಶುಲ್ಕ ಇತ್ಯಾದಿ ವಿವರಗಳ ಬಗ್ಗೆ ರಾಯಚೂರು ವಿಶ್ವವಿದ್ಯಾಲಯದ ಜಾಲತಾಣ https://raichuruniversity.ac.in ನಲ್ಲಿ ನೋಡಬಹುದು.
5. 2023–24 ನೇ ಸಾಲಿಗೆ ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ಅರ್ಜಿಗಳನ್ನು ಸಲ್ಲಿಸಲು 18.11.2023 ಕೊನೆಯ ದಿನಾಂಕವಾಗಿರುತ್ತದೆ.
6. ಅಭ್ಯರ್ಥಿಗಳು ಆನ್‌ಲೈನ್ (UUCMS)ನಲ್ಲಿ ಮುಖಾಂತರ ಕೋರ್ಸಿಗೆ ಸಲ್ಲಿಸಿದ ಅರ್ಜಿಗಳ ಮುದ್ರಿತ ಪ್ರತಿ (Hard Copy)ಯ ಜೊತೆ ಸ್ವಯಂ ಧೃಡೀಕರಿಸಿದ ದಾಖಲೆಗಳನ್ನು ತಕ್ಷಣವೇ ಖುದ್ದಾಗಿ ಅಥವಾ ಸ್ಪಿಡ್ ಪೋಸ್ಟ್ ಮುಖಾಂತರ ದಿನಾಂಕ 18.11.2023 ರ ಒಳಗಾಗಿ ಸಂಬಂಧಪಟ್ಟ **ವಿಭಾಗಗಳ ಮುಖ್ಯಸ್ಥರು, ಸ್ನಾತಕೋತ್ತರ ವಿಭಾಗ,** ರಾಯಚೂರು ವಿಶ್ವವಿದ್ಯಾಲಯ, ರಾಯಚೂರು ಈ ವಿಳಾಸಕ್ಕೆ ಕಳುಹಿಸತಕ್ಕದ್ದು.
7. ಅಂತಿಮ ದಿನಾಂಕದ ನಂತರ ಸಲ್ಲಿಸುವ ಮತ್ತು ಅಪೂರ್ಣ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೆ ತಿರಸ್ಕರಿಸಲಾಗುವುದು.
8. UUCMS ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಗಳನ್ನು ಮಾತ್ರ ಸೀಟುಗಳ ಆಯ್ಕೆಗಾಗಿ ಪರಿಗಣಿಸಲಾಗುವುದು.
9. ಆಫ್‌ಲೈನ್ ಮೂಲಕ ಬರುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ.
10. ಎಲ್ಲ ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ಪ್ರವೇಶ ಪರೀಕ್ಷೆಯನ್ನು ಕಡ್ಡಾಯವಾಗಿ ನಡೆಸಲಾಗುವುದು (ವಿವರಗಳಿಗೆ ವಿಶ್ವವಿದ್ಯಾಲಯದ ಜಾಲತಾಣ https://raichuruniversity.ac.in ವನ್ನು ನೋಡುವುದು).
11. ಸ್ನಾತಕೋತ್ತರ ಕೋರ್ಸ್‌ಗಳನ್ನು ಒಳಗೊಂಡಂತೆ ಪ್ರತಿ ಕೋರ್ಸ್‌ಗೆ ಕನಿಷ್ಠ 10 ಅಭ್ಯರ್ಥಿಗಳ ಪ್ರವೇಶವಿದ್ದಲ್ಲಿ ಮಾತ್ರ ಅಂತಹ ಕೋರ್ಸ್‌ಗಳನ್ನು ನಡೆಸಲಾಗುವುದು. ಇಲ್ಲದಿದ್ದರೆ ಶುಲ್ಕವನ್ನು ಮರುಪಾವತಿಸಲಾಗುತ್ತದೆ.

ಸಹಿ/–
ಕುಲಸಚಿವರು,
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು